**All India Radio: Bangalore**
**Regional Bulletin In Kannada**
**12.03.2025 / 6.40 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**12.03.2025 / 6.40 p.m.**
**<><><><>**

ಮುಖ್ಯಾಂಶಗಳು

- ಕೆಪಿಎಸ್‌ಸಿ ಪರೀಕ್ಷೆ ಲೋಪ ಹಿನ್ನೆಲೆ; ಯುಪಿಎಸ್‌ಸಿ ಮಾದರಿ ನೇಮಕಾತಿ ಭರವಸೆ ನೀಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ
- ಹೆತ್ತವರವನ್ನು ನೋಡಿಕೊಳ್ಳದ ಮಕ್ಕಳ ದಾನಪತ್ರ ರದ್ದುಗೊಳಿಸುವ ಅವಕಾಶ ಕಾನೂನಿನಲ್ಲಿದೆ - ಸಚಿವ ಕೃಷ್ಣಭೈರೇಗೌಡ
- ಶಾಸಕರ ಘನತೆಗೆ ಚ್ಯುತಿ ಬರದಂತೆ ಗ್ಯಾರಂಟಿ ಸಮಿತಿ ಕಾರ್ಯನಿರ್ವಹಿಸಲು ಜಿಲ್ಲಾಡಳಿತಕ್ಕೆ ಸರ್ಕಾರ ಸೂಚನೆ
- ಕೊಡಗು ಜಿಲ್ಲೆಯ ಕೆಲವೆಡೆ ಲಘು ಭೂಕಂಪನ; ಆತಂಕಪಡುವ ಅಗತ್ಯವಿಲ್ಲ - ರಾಜ್ಯ ನೈಸರ್ಗಿಕ ವಿಕೋಪ ನಿಗಾ ಕೇಂದ್ರ ಸ್ಪಷ್ಟನೆ
- ರಾಜ್ಯದ ವಿವಿಧೆಡೆ ಜಗದ್ಗುರು ರೇಣುಕಾಚಾರ್ಯರ ಜಯಂತಿ ಆಚರಣೆ

<><><><>

ಕೆಪಿಎಸ್‌ಸಿ ಪರೀಕ್ಷೆ ಲೋಪದ ವಿಚಾರವನ್ನು ವಿಧಾನಸಭೆಯಲ್ಲಿ ಪ್ರಸ್ತಾಪಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಉಪ್ಪು ತಿಂದವರು ನೀರು ಕುಡಿಯಲೇಬೇಕು ಎಂದು ಎಚ್ಚರಿಕೆ ನೀಡಿದ್ದಾರೆ. ಕೆಪಿಎಸ್‌ಸಿ ಕುರಿತ ಪ್ರತಿಪಕ್ಷಗಳ ನಿಲುವಳಿ ಸೂಚನೆ ಮೇಲೆ ಚರ್ಚೆಗೆ ಉತ್ತರ ನೀಡಿದ ಅವರು ಪ್ರಕರಣ ನ್ಯಾಯಾಲಯದಲ್ಲಿರುವುದರಿಂದ ಮರುಪರೀಕ್ಷೆಗೆ ಸೂಚನೆ ನೀಡಲು ಸಾಧ್ಯವಿಲ್ಲ. ಆದರೆ ನ್ಯಾಯಾಲಯ ಸೂಚನೆ ನೀಡಿದರೆ, ಮರುಪರೀಕ್ಷೆ ನಡೆಸಲಾಗುವುದು ಎಂದು ತಿಳಿಸಿದ್ದಾರೆ. ಈ ವಿಚಾರದಲ್ಲಿ ಸರ್ವಪಕ್ಷ ಸಭೆ ಕರೆದು ಚರ್ಚಿಸಲು ಸಿದ್ಧ ಎಂದು ಹೇಳಿದ್ದಾರೆ. ಕೆಪಿಎಸ್‌ಸಿ ಸರಿಯಾಗಬೇಕು ಎಂಬುದು ಸದನದ ಮತ್ತು ಸರ್ಕಾರದ ಕಳಕಳಿ ಆಗಿದೆ ಎಂದು ಪುನರುಚ್ಚರಿಸಿದ್ದಾರೆ.

<><><><>

ತಂದೆ-ತಾಯಿ ಹಾಗೂ ಹಿರಿಯರನ್ನು ಆರೈಕೆ ಮಾಡದ ಮಕ್ಕಳಿಗೆ ಅಥವಾ ಸಂಬಂಧಿಕರಿಗೆ ನೀಡಿದ ದಾನಪತ್ರವನ್ನು ರದ್ದು ಮಾಡುವ ಅವಕಾಶವನ್ನು ಕೇಂದ್ರ ಸರ್ಕಾರದ “ಪೋಷಕರು ಮತ್ತು ಹಿರಿಯ ನಾಗರಿಕರ ನಿರ್ವಹಣೆ ಮತ್ತು ಕಲ್ಯಾಣ ಕಾಯ್ದೆ ೨೦೦೭” ನೀಡಿದೆ ಎಂದು ಕೃಷ್ಣ ಬೈರೇಗೌಡ ವಿಧಾನಪರಿಷತ್‌ನಲ್ಲಿ ತಿಳಿಸಿದ್ದಾರೆ. “ಹಿರಿಯ ನಾಗರೀಕರ ದೂರು ಸಾಬೀತಾದರೆ, ತಂದೆ ತಾಯಿಯಿಂದ ಆಸ್ತಿ ಪಡೆದು ಅವರ ಆರೈಕೆ ಮಾಡದಿದ್ದರೆ, ವಿಲ್ ಅಥವಾ ದಾನಪತ್ರವನ್ನು ರದ್ದುಗೊಳಿಸಿ ಮತ್ತೆ ಪೋಷಕರ ಹೆಸರಿಗೇ ಮರುಸ್ಥಾಪಿಸಲು ಕಾನೂನಿನಲ್ಲಿ ಅವಕಾಶ ಇದೆ. ಈ ಜವಾಬ್ದಾರಿಯನ್ನು ಉಪ ವಿಭಾಗಾಧಿಕಾರಿಗಳಿಗೆ ನೀಡಲಾಗಿದೆ ಎಂದು ಮಾಹಿತಿ ನೀಡಿದ್ದಾರೆ. ತಮ್ಮ ವಿಭಾಗದ ಅನ್ಯ ಯೋಜನೆಗಳ ಮಾಹಿತಿ ನೀಡಿದ ಸಚಿವರು, ಗ್ರಾಮ ಹಾಗೂ ತಾಲ್ಲೂಕು ಮಟ್ಟದ ಭೂದಾಖಲೆಗಳನ್ನು ತಾಳೆ ಮಾಡಿ ಕ್ರಮಬದ್ಧಗೊಳಿಸುವ ಜಮಾಬಂದಿ ಪ್ರಕ್ರಿಯೆಯನ್ನು ವೇಗವಾಗಿ ನಿರ್ವಹಿಸಲು ಇ-ಜಮಾಬಂದಿ ತಂತ್ರಾಂಶವನ್ನು ಒಂದು ವರ್ಷದೊಳಗೆ ಪೂರ್ಣಗೊಳಿಸಲಾಗುವುದು ಎಂದು ಹೇಳಿದ್ದಾರೆ. ಕುಡಿಯುವ ನೀರು, ವಸತಿ, ಮಹಾತ್ಮಗಾಂಧಿ ಉದ್ಯೋಗ ಖಾತ್ರಿ ನರೇಗಾ ಯೋಜನೆಗಳ ಪರಿಣಾಮಕಾರಿ ಅನುಷ್ಠಾನ ದೃಢಪಡಿಸುವುದು ಹಾಗೂ ಗ್ರಾಮ ಪಂಚಾಯತಿ ಆಡಳಿತದಲ್ಲಿ ಪಾರದರ್ಶಕತೆ ತರುವುದು ಜಮಾಬಂದಿ ಯೋಜನೆಯ ಉದ್ದೇಶವಾಗಿದೆ ಎಂದು ಮಾಹಿತಿ ನೀಡಿದ್ದಾರೆ.

<><><><>

ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಇಂದು ವಿಧಾನ ಸಭೆಯಿಂದ ತಿದ್ದುಪಡಿಯೊಂದಿಗೆ ಅಂಗೀಕೃತ ರೂಪದಲ್ಲಿರುವ ೨೦೨೫ನೇ ಸಾಲಿನ "ಗ್ರೇಟರ್ ಬೆಂಗಳೂರು ಆಡಳಿತ ವಿಧೇಯಕವನ್ನು ಪರಿಷತ್‌ನಲ್ಲಿ ಮಂಡಿಸಿದ್ದಾರೆ. ನಗರದ ಸರ್ವತೋಮುಖ ಅಭಿವೃದ್ಧಿಗೆ ಬಿಡಿಎ, ಬಿಬಿಎಂಪಿ, ಜಲಮಂಡಳಿ, ಇನ್ನಿತರ ಇಲಾಖೆಗಳ ಸಮನ್ವಯೊಂದಿಗೆ ಹಲವು ಸಭೆಗಳನ್ನು ನಡೆಸಿ ಗ್ರೇಟರ್ ಬೆಂಗಳೂರು ಆಡಳಿತ ವಿಧೇಯಕವನ್ನು ಸಿದ್ಧಪಡಿಸಲಾಗಿದೆ ಎಂದು ತಿಳಿಸಿದ್ದಾರೆ. ಪ್ರತಿಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಮಾತನಾಡಿ, ಬೆಂಗಳೂರನ್ನು ೭ ಭಾಗಗಳಾಗಿ ವಿಂಗಡಿಸುವ ಮೂಲಕ ಕೆಂಪೇಗೌಡರ ಹೆಸರಿಗೆ ಮಸಿ ಬಳಿಯಲಾಗುತ್ತಿದೆ ಎಂದು ದೂರಿದ್ದಾರೆ.

<><><><>

ಗ್ಯಾರಂಟಿ ಸಮಿತಿಗಳಿಂದ ಶಾಸಕರ ಘನತೆಗೆ ಕುಂದಿಲ್ಲ ಎಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ವಿಧಾನಸಭೆಯಲ್ಲಿ ತಿಳಿಸಿದ್ದಾರೆ. ಪ್ರತಿಪಕ್ಷ ನಾಯಕರ ಆರೋಪಕ್ಕೆ ಪ್ರತಿಕ್ರಿಯಿಸಿದ ಅವರು, ಅಧಿವೇಶನ ಮುಗಿಯುತ್ತಿದ್ದಂತೆ ಈ ಬಗ್ಗೆ ಸಭೆ ಕರೆದು ತಕರಾರುಗಳನ್ನು ಪರಿಹರಿಸಲಾಗುವುದು ಎಂದು ಹೇಳಿದ್ದಾರೆ. ಅಧಿಕಾರಕ್ಕೆ ಬಂದಾಗ ಪಕ್ಷದ ಕಾರ್ಯಕರ್ತರಿಗೆ ಅಧಿಕಾರದಲ್ಲಿ ಅವಕಾಶ ನೀಡುವುದು ಹಿಂದಿನಿಂದಲೂ ನಡೆದುಕೊಂಡು ಬಂದಿದೆ. ಮಹಾರಾಷ್ಟ್ರದಲ್ಲಿ ಎಲ್ಲಾ ಶಾಸಕರ ಕಚೇರಿಗೂ ಆರ್‌ಎಸ್‌ಎಸ್ ಕಾರ್ಯಕರ್ತರನ್ನು ನೇಮಿಸಿಕೊಳ್ಳುತ್ತಿರುವದನ್ನು ಉಲ್ಲೇಖಿಸಿದರು. ತಾಲ್ಲೂಕುಗಳಲ್ಲಿ ಶಾಸಕರ ಘನತೆಗೆ, ಅಧಿಕಾರಕ್ಕೆ ಯಾವುದೇ ಚ್ಯುತಿ ಬರದಂತೆ ಎಲ್ಲಾ ಜಿಲ್ಲಾಡಳಿತಕ್ಕೂ ಸೂಚನೆ ನೀಡಲಾಗಿದೆ ಎಂದು ತಿಳಿಸಿದ್ದಾರೆ. ರಾಜ್ಯ ಮತ್ತು ಜಿಲ್ಲಾ, ತಾಲ್ಲೂಕು ಗ್ಯಾರಂಟಿ ಜಾರಿ ಸಮಿತಿಗಳಲ್ಲಿ ಬದಲಾವಣೆ ಇಲ್ಲ ಎಂದು ಇದೇ ಸಂದರ್ಭದಲ್ಲಿ ಮುಖ್ಯಮಂತ್ರಿ ಸ್ಪಷ್ಟಪಡಿಸಿದ್ದಾರೆ.

<><><><>

ಗ್ಯಾರಂಟಿ ಅನುಷ್ಠಾನ ಸಮಿತಿ ಬಗ್ಗೆ ಬಿಜೆಪಿಗೆ ಈಗ ಅರಿವಾಯಿತೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಪ್ರಶ್ನಿಸಿದ್ದಾರೆ. ವಿಧಾನಸೌಧದ ಬಳಿ ಪ್ರತಿಕ್ರಿಯಿಸಿದ ಅವರು, "ತಮ್ಮ ಸರ್ಕಾರ ಅಧಿಕಾರಕ್ಕೆ ಬಂದ ತಕ್ಷಣವೇ ಗ್ಯಾರಂಟಿ ಅನುಷ್ಠಾನ ಸಮಿತಿ ರಚಿಸಲಾಗಿದೆ ಎಂದು ತಿಳಿಸಿದರು. ಬಡವರಿಗಾಗಿ ಹೊಸದಾಗಿ ಐದು ಗ್ಯಾಂಟಿ ಯೋಜನೆಗಳನ್ನು ನೀಡಿದ್ದು, ಈ ಯೋಜನಗಳು ಸರಿಯಾಗಿ ತಲುಪುತ್ತಿದೆಯೇ ಇಲ್ಲವೇ, ಇದರ ಸದುಪಯೋಗವಾಗುತ್ತಿದೆಯೇ ಅಥವಾ ದುರುಪಯೋಗವಾಗುತ್ತಿದೆಯೇ ಎಂದು ಮನೆ ಮನೆಗೆ ಹೋಗಿ ಪರಿಶೀಲನೆ ಮಾಡಲು ಕಾರ್ಯಕರ್ತರಿಗೆ ಜವಾಬ್ದಾರಿ ನೀಡಲಾಗಿದೆ ಎಂದು ಸಮರ್ಥಿಸಿಕೊಂಡಿದ್ದಾರೆ.

<><><><>

ಮುಂಬೈನಲ್ಲಿ ನಡೆಯಲಿರುವ ವಿಶ್ವ ಧ್ವನಿ ದೃಶ್ಯ ಮತ್ತು ಮನರಂಜನಾ ಶೃಂಗಸಭೆಯ ಪೂರ್ವಭಾವಿಯಾಗಿ ಜಾಗತಿಕ ಸಮುದಾಯವನ್ನು ಸಂಪರ್ಕಿಸುವ ಎಲ್ಲಾ ಪ್ರಯತ್ನವನ್ನು ಭಾರತ ಸರ್ಕಾರ ಕೈಗೊಂಡಿದೆ. ಮೇ ೧ ರಿಂದ ಆರಂಭವಾಗಲಿರುವ ಈ ನಾಲ್ಕು ದಿನಗಳ ಶೃಂಗಸಭೆಯನ್ನು ಜಾಗತಿಕ ಮಟ್ಟದ ಮಾಧ್ಯಮ ಸಂವಾದ ವೇದಿಕೆಯಾಗಿ ರೂಪಿಸಲು ಸರ್ಕಾರ ಪ್ರಯತ್ನಿಸುತ್ತಿದೆ. ಈ ಹಿನ್ನೆಲೆಯಲ್ಲಿ ಕೇಂದ್ರ ಸಚಿವರಾದ ಡಾ. ಜೈಶಂಕರ್, ವಾರ್ತಾ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್, ರಾಜ್ಯ ಸಚಿವ ಡಾ. ಎಲ್. ಮುರುಗನ್ ನವದೆಹಲಿಯಲ್ಲಿ

ನಾಳೆ ಪೂರ್ವಭಾವಿ ಸಭೆ ಕರೆದಿದ್ದು, ಇದರಲ್ಲಿ ಅತಿಥ್ಯ ರಾಜ್ಯವಾದ ಮಹಾರಾಷ್ಟ್ರದ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಭಾಗವಹಿಸಲಿದ್ದಾರೆ. ವೇವ್ಸ್ ಶೃಂಗಸಭೆಯನ್ನು ಜಾಗತಿಕ ವೇದಿಕೆಯಾಗಿ ಪರಿವರ್ತಿಸಿ ೧೦೦ಕ್ಕೂ ಹೆಚ್ಚು ರಾಯಭಾರಿಗಳನ್ನು ಭಾಗವಹಿಸುವಂತೆ ಅಗತ್ಯ ಕ್ರಮಗಳ ಕುರಿತು ಸಭೆಯಲ್ಲಿ ಚರ್ಚಿಸಲಾಗುವುದು. ವೇವ್ಸ್ ಲಾಂಛನದಡಿ ಸಾಮರಸ್ಯ ಮತ್ತು ಮಾಧ್ಯಮ ಹಾಗೂ ಮನರಂಜನಾ ಕ್ಷೇತ್ರದ ಬೆಳವಣಿಗೆಗೆ ಪೂರಕ ವಾತಾವರಣ ಕಲ್ಪಿಸಲು ಈ ಶೃಂಗಸಭೆ ಮಹತ್ವದ ವೇದಿಕೆಯಾಗಿಸಲು ಸರ್ಕಾರ ಪ್ರಯತ್ನಿಸುತ್ತಿದೆ.

<><><>

ಕೊಡಗು ಜಿಲ್ಲೆಯ ಮಡಿಕೇರಿ ತಾಲ್ಲೂಕಿನ ಮದೆನಾಡು ಮತ್ತು ಗಾಳಿಬೀಡು ಗ್ರಾಮಪಂಚಾಯತ್ ವ್ಯಾಪ್ತಿಯಲ್ಲಿ ಇಂದು ಲಘು ಭೂ ಕಂಪನವಾಗಿದೆ. ರಿಕ್ಟರ್ ಮಾಪಕದಲ್ಲಿ ಇದರ ತೀವ್ರತೆ ೧.೬ ದಾಖಲಾಗಿದೆ. ಲಘು ಭೂಕಂಪನವಾಗಿರುವುದರಿಂದ ಜನರು ಆತಂಕಕ್ಕೆ ಒಳಗಾಗುವ ಅಗತ್ಯವಿಲ್ಲವೆಂದು ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ನಿಗಾ ಕೇಂದ್ರ ತಿಳಿಸಿದೆ. ಮದೆನಾಡು, ಮೊಣ್ಣಂಗೇರಿ, ಜೋಡುಪಾಲ, ದೇವಸ್ತೂರು ಮತ್ತು ಮಡಿಕೇರಿ ನಗರದ ಒಂದೆರಡು ಭಾಗದಲ್ಲಿ ಭೂಕಂಪನದ ಅನುಭವವಾಗಿದೆ ಎಂದು ಸ್ಥಳೀಯ ನಿವಾಸಿಗಳು ತಿಳಿಸಿದ್ದಾರೆ.

<><><>

ವೈದ್ಯಕೀಯ, ಎಂಜಿನಿಯರಿಂಗ್ ಸೇರಿದಂತೆ ಉನ್ನತ ಶಿಕ್ಷಣ ಕ್ಷೇತ್ರದಲ್ಲಿ ರಾಜ್ಯ ಮುಂಚೂಣಿ ಸಾಲಿನಲ್ಲಿದ್ದು, ಇದಕ್ಕೆ ವೀರಶೈವ, ಲಿಂಗಾಯತ ಮಠ ಮಾನ್ಯಗಳು ಹಾಗೂ ವಿವಿಧ ಸಂಘ, ಸಂಸ್ಥೆಗಳ ಕೊಡುಗೆ ಅಪಾರವಾಗಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಅಭಿಪ್ರಾಯಪಟ್ಟಿದ್ದಾರೆ. ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಆಯೋಜಿಸಿದ್ದ ಜಗದ್ಗುರು ರೇಣುಕಾಚಾರ್ಯ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಪ್ರಕೃತಿ, ಪರಿಸರ ರಕ್ಷಣೆ ನಮ್ಮೆಲ್ಲರ ಹೊಣೆ ಎಂದು ತಿಳಿಸಿದರು. ಮುಂದಿನ ಪೀಳಿಗೆಗೆ ಭೂಮಿಯನ್ನು ಮಾತ್ರ ಹಸ್ತಾಂತರಿಸಲು ಸಾಧ್ಯ ಎಂದು ಹೇಳಿದರು.

<><><>

ರಾಜ್ಯದ ವಿವಿಧೆಡೆ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಆಚರಿಸಲಾಯಿತು. ಹಾಸನ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಆಯೋಜಿಸಲಾಗಿದ್ದ ಮೆರವಣಿಗೆಗೆ ಜಿಲ್ಲಾಧಿಕಾರಿ ಸಿ. ಸತ್ಯಭಾಮ ಚಾಲನೆ ನೀಡಿದರು. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ

ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ರೇಣುಕಾಚಾರ್ಯರ ಜಯಂತಿ ಆಚರಿಸಲಾಯಿತು. ದಾವಣಗೆರೆ ಜಿಲ್ಲಾಡಳಿತ ಭವನದಲ್ಲಿಂದು ಜಗದ್ಗುರು ರೇಣುಕಾಚಾರ್ಯ ಜಯಂತಿ ಹಾಗೂ ಯುಗ ಮಾನೋತ್ಸವ ಕಾರ್ಯಕ್ರಮಕ್ಕೆ ಜಿಲ್ಲಾಧಿಕಾರಿ ಡಾ.ಗಂಗಾಧರ ಸ್ವಾಮಿ ಚಾಲನೆ ನೀಡಿದರು. ಶಾಂತಿಯುತ ಸಹಬಾಳ್ವೆ ಸಮಾಜ ನಿರ್ಮಾಣ ಆಗಬೇಕಾದರೆ ಜಗದ್ಗುರು ರೇಣುಕಾಚಾರ್ಯರ ಸಂದೇಶ, ಮೌಲ್ಯಗಳು ದಾರಿದೀಪ ಎಂದು ಚಿತ್ರದುರ್ಗದಲ್ಲಿ ಹರಿಹರ ಗಿರಿಯಮ್ಮ ಪ್ರಥಮ ದರ್ಜೆ ಕಾಲೇಜು ಪ್ರಾಧ್ಯಾಪಕ ಪ್ರೊ.ಗುರುಬಸವ ಹಿರೇಮಠ್ ಅಭಿಪ್ರಾಯಪಟ್ಟಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ, ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ 'ಶ್ರೀ ಜಗದ್ಗುರು ರೇಣುಕಾಚಾರ್ಯ' ಜಯಂತಿಯನ್ನು ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಆಚರಿಸಲಾಯಿತು. ಜಗದ್ಗುರು ರೇಣುಕಾಚಾರ್ಯರು ಧರ್ಮದಿಂದಲೇ ವಿಶ್ವಕ್ಕೆ ಶಾಂತಿ ಎಂದು ಸಾರಿದ ಮಹಾಮಹಿಮರಾಗಿದ್ದಾರೆ ಎಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ ತಿಳಿಸಿದರು. ತಮ್ಮ ತತ್ವ ಸಿದ್ಧಾಂತಗಳ ಮೂಲಕ ಸಮಾಜದ ಓರೆಕೋರೆಗಳನ್ನು ಹೋಗಲಾಡಿಸಲು ಶ್ರಮಿಸಿದವರು ಜಗದ್ಗುರು ರೇಣುಕಾಚಾರ್ಯರು ಎಂದು ವಿಜಯಪುರ ಅಪರ ಜಿಲ್ಲಾಧಿಕಾರಿ ಸೋಮಲಿಂಗ ಗೆಣ್ಣೂರು ಹೇಳಿದ್ದಾರೆ. ಉತ್ತರಕನ್ನಡ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಂಯುಕ್ತ ಆಶ್ರಯದಲ್ಲಿ ಕಾರವಾರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜಗದ್ಗುರು ರೇಣುಕಾಚಾರ್ಯ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸುವ ಮೂಲಕ ಅಪರ ಜಿಲ್ಲಾಧಿಕಾರಿ ಉದ್ಘಾಟಿಸಿದರು.

<><><><>

ನರೇಗಾದಡಿ ಮಹಿಳಾ ಕೂಲಿಕಾರರ ಭಾಗವಹಿಸುವಿಕೆಯನ್ನು ಶೇಕಡ ೧೦ರಷ್ಟು ಹೆಚ್ಚಿಸುವ ನಿಟ್ಟಿನಲ್ಲಿ ಶಿರಸಿ ತಾಲೂಕಿನ ಎಲ್ಲಾ ಗ್ರಾಮ ಪಂಚಾಯತ್ ಗಳಲ್ಲಿ "ಸ್ತ್ರೀ ಚೇತನ ಅಭಿಯಾನ ಹಮ್ಮಿಕೊಳ್ಳಲಾಗುತ್ತಿದೆ ಎಂದು ಶಿರಸಿ ತಾಲೂಕು ಪಂಚಾಯತ್ ಕಾರ್ಯ ನಿರ್ವಾಹಕ ಅಧಿಕಾರಿ ಸತೀಶ್ ಹೆಗಡೆ ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>